ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ರಾಜ್ಯದ ಗ್ರಾಮ ಪಂಚಾಯತಿಗಳನ್ನು ಜನಸಂಖ್ಯೆ ಆಧಾರದ ಮೇಲೆ ಪಟ್ಟಣ ಪಂಚಾಯತಿಗಳನ್ನು ಪುರಸಭೆಗಳನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

924(1090) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ 2011ರ ಜನಗಣತಿ ಆಧಾರದ ಮೇಲೆ 20,000 ದಿಂದ 25,000 ಜನಸಂಖ್ಯೆಯಿರುವ ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಬೇಕೆಂದು ನಿಯಮವಿದ್ದು, ಇದನ್ನು ಅನುಷ್ಠಾನಗೊಳಿಸಲಾಗಿದೆಯೇ;

(ಆ) ಬೆಳಗಾವಿ ಜಿಲ್ಲೆಯ ಮಚ್ಚೆ ಮತ್ತು ಪೀರನವಾಡಿ ಗ್ರಾಮ ಪಂಚಾಯತಿಗಳು ಸುಮಾರು 30,000 ಕ್ಕಿಂತಲೂ ಹೆಚ್ಚಿನ ಜನಸಂಖ್ಯೆ ಹೊಂದಿದ್ದು, ಬೆಳಗಾವಿ ಪಟ್ಟಣದ ಅಂಚಿನಲ್ಲಿಯೇ ಇದ್ದು, ಇವುಗಳನ್ನು ಪುರಸಭೆಗಳನ್ನಾಗಿ ಮೇಲ್ದರ್ಜೆಗೇರಿಸದೇ ಮಹಾನಗರ ಪಾಲಿಕೆಗೂ ಸೇರಿಸಿಕೊಳ್ಳದೆ ಯಥಾಸ್ಥಿತಿಯಲ್ಲಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇದರಿಂದಾಗಿ ಸದರಿ ಪಂಚಾಯತ್ ವ್ಯಾಪ್ತಿಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳಾಗದೆ ಜನರು ಸಮಸ್ಯೆಗಳನ್ನೆದುರಿಸುತ್ತಿರುವ ಬಗ್ಗೆ ಸರ್ಕಾರ ಗಮನಿಸಿದೆಯೇ;

(ಈ) ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಯಾವ ಕ್ರಮ ಜರುಗಿಸಲಾಗುತ್ತದೆ ?